VK
ವಿಜಯ ಕರ್ನಾಟಕ

**Sunday 22nd January 2022, Page No.14**

## SAD DEMISE

ಪತ್ತೆ ಮಾಡಿದ್ದಾರೆ.

### ನಿಧನ

## ಎಂ.ಕೆ. ಪಾಂಡುರಂಗ ಶೆಟ್ಟಿ

**ಬೆಂಗಳೂರು:** ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್‌ನ (ಆರ್.ವಿ. ಶಿಕ್ಷಣ ಸಂಸ್ಥೆಗಳು) ಅಧ್ಯಕ್ಷ ಡಾ. ಎಂ.ಕೆ.ಪಾಂಡುರಂಗ ಶೆಟ್ಟಿ ಅವರು ಶನಿವಾರ ನಿಧನರಾದರು. ವಯೋಸಹಜ ಕಾಯಿಲೆಯಿಂದ



ಬಳಲುತ್ತಿದ್ದ ಅವರು ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಭಾನುವಾರ ಬೆಳಗ್ಗೆ 10 ಗಂಟೆಯವರೆಗೆ ಜಯನಗರದ ಅಶೋಕ ಪಿಲ್ಲರ್ ರಸ್ತೆಯಲ್ಲಿರುವ ಆರ್.ವಿ.ಟೀಚರ್ಸ್ ಕಾಲೇಜು ಸಭಾಂಗಣದಲ್ಲಿ ಅಂತಿಮ ದರ್ಶನದ ವ್ಯವಸ್ಥೆ ಮಾಡಲಾಗಿದೆ. ಮಧ್ಯಾಹ್ನದ ಬಳಿಕ ಬನಶಂಕರಿ ಹಿಂದೂ ರುದ್ರಭೂಮಿಯಲ್ಲಿ ಅಂತ್ಯ ಸಂಸ್ಕಾರ ನೆರವೇರಿಸಲಾಗುತ್ತದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಮೃತರಿಗೆ ಪತ್ನಿ, ಇಬ್ಬರು ಪುತ್ರರಿದ್ದಾರೆ. 1972ರಿಂದ ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದ ಅವರು, ಸಂಸ್ಥೆಯನ್ನು ದೊಡ್ಡ ಮಟ್ಟದಲ್ಲಿ ಕಟ್ಟುವಲ್ಲಿ ಅಪಾರವಾಗಿ ಶ್ರಮಿಸಿದ್ದಾರೆ. ಎಫ್‌ಕೆಸಿಸಿಐ ಮತ್ತು ಅಖಿಲ ಭಾರತ ಮ್ಯಾನ್ಯುಫ್ಯಾಕ್ಚರ್ಸ್ ಅಸೋಸಿಯೇಷನ್ ಅಧ್ಯಕ್ಷರಾಗಿ, ಬೆಂಗಳೂರಿನ ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆ ಸಂಸ್ಥೆ ಸದಸ್ಯರಾಗಿ, ಬೆಂಗಳೂರು ವಿಶ್ವವಿದ್ಯಾಲಯದ ಸೆನೆಟ್ ಸದಸ್ಯರಾಗಿ, ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಹೂಡಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಶಿಕ್ಷಣ ರಂಗದಲ್ಲಿ ಸಲ್ಲಿಸಿದ ಸೇವೆಯನ್ನು ಪರಿಗಣಿಸಿ ರಾಜ್ಯ ಸರಕಾರವು ಪ್ರತಿಷ್ಠಿತ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಿದೆ. ಪ್ರಸ್ತುತ ಕರ್ನಾಟಕ ಅನುದಾನರಹಿತ ಖಾಸಗಿ ಕಾಲೇಜುಗಳ ಮ್ಯಾನೇಜ್‌ಮೆಂಟ್ ಅಸೋಸಿಯೇಷನ್ ಮತ್ತು ಕರ್ನಾಟಕ ಖಾಸಗಿ ಕಾಲೇಜುಗಳ ಪ್ರತಿಷ್ಠಾನದ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸುತ್ತಿದ್ದರು.